5049 (5892) ಶ್ರೀ ಪದ್ಮನಾಭ ಕೊಟ್ಟಾರಿ ಕೆ. (ವಿಟ್ಲ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಶಿಕ್ಷಣದಲ್ಲಿ ನಿಗಧಿಪಡಿಸಿದ ಶುಲ್ಕದಲ್ಲಿ ವಿದ್ಯಾರ್ಥಿನಿಯರಿಗೆ ವಿನಾಯಿತಿ ನೀಡಿರುವುದು ನಿಜವಲ್ಲವೆ;

ಆ) ವೃತ್ತಿ ಶಿಕ್ಷಣ (ಜೆಒಸಿ)ವು ಪದವಿ ಪೂರ್ವ ಶಿಕ್ಷಣಕ್ಕೆ ಸಮಾನವಾಗಿದ್ದು, ಅಲ್ಲಿ ವಿದ್ಯಾರ್ಥಿನಿಯರಿಗೆ ಶುಲ್ಕ ವಿನಾಯಿತಿ ನೀಡದಿರಲು ಕಾರಣಗಳೇನು;

ಇ) ಈ ಬಗ್ಗೆ ಶುಲ್ಕ ವಿನಾಯಿತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಆರ್. ರಾಮಲಿಂಗರೆಡ್ಡಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

ಅ) ಹೌದು

ಆ) ವೃತ್ತಿ ಶಿಕ್ಷಣ (ಜೆ.ಒ.ಸಿ.) ಪೂರೈಸಿದ ವಿದ್ಯಾರ್ಥಿನಿಯರು ಸ್ವಯಂ ಉದ್ಯೋಗಕ್ಕೆ ಅರ್ಹರಾಗುವುದರಿಂದ ಇವರುಗಳಿಗೆ ಶುಲ್ಕ ವಿನಾಯಿತಿ ನೀಡಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

5050 (5893) ಶ್ರೀ ಪದ್ಮನಾಭ ಕೊಟ್ಟಾರಿ.ಕೆ (ವಿಟ್ಲಾ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

01. 2005-06ನೇ ಸಾಲಿನಲ್ಲಿ ಸರ್ಕಾರ ರಾಜ್ಯದಲ್ಲಿ ಪ್ರಾರಂಭಿಸಿದ ನೂತನ ಪ್ರೌಢಶಾಲೆಗಳ ಸಂಖ್ಯೆ ಎಷ್ಟು? ಅವುಗಳ ಹಂಚಿಕೆಯ ವಿವರಗಳು ಎಷ್ಟು (ಜಿಲ್ಲಾವಾರು ಸಂಖ್ಯೆ ನೀಡುವುದು);

02. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಂಚಿಕೆಯ ತಾಲ್ಲೂಕುವಾರು ವಿವರಗಳೇನು;

03. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರೌಢಶಾಲೆಗಳ ಅತ್ಯಾವಶ್ಯಕತೆ ಇದ್ದು ಕಡಿಮೆ ಪ್ರಮಾಣದಲ್ಲಿ ಪ್ರೌಢಶಾಲೆಗಳ ಹಂಚಿಕೆ ಕಾರಣಗಳೇನು?

04. ಈ ಬೇಡಿಕೆಗಳನ್ನು ಯಾವಾಗ ಪೂರೈಸಲಾಗುವುದು;

ಶ್ರೀ ಆರ್. ರಾಮಲಿಂಗರೆಡ್ಡಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು.

01. 2005-06ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು 124 ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲಾಗಿದೆ (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ).

02. 2005-06ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಿರುವುದಿಲ್ಲ. ಡಾ//ನಂಜುಂಡಪ್ಪ ವರದಿಯ ಆಧಾರದ ಮೇಲೆ ಗುರುತಿಸಿರುವ ಹಿಂದುಳಿದ ತಾಲ್ಲೂಕಿಗೆ ಒಂದಗಂತೆ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ. ಈ ಎರಡು ಜಿಲ್ಲೆಗಳು ಮುಂದುವರೆದ ಜಿಲ್ಲೆಗಳೆಂದು ಗುರುತಿಸಿರುವುದರಿಂದ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಿರುವುದಿಲ್ಲ.

03. ಕ್ರಮ ಸಂಖ್ಯೆ: 02ಕ್ಕೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

04. 2005-06ನೇ ಸಾಲಿನಲ್ಲಿ ಹೆಚ್ಚು ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.